**26 ಸೆಪ್ಟೆಂಬರ್, 2017**

## ಆರ್ ಎಸ್ ಕೋ ಆಪರೇಟಿವ್ ಬ್ಯಾಂಕ್ ಲಿಮಿಟೆಡ್, ನಾಶಿಕ್, ಮಹಾರಾಷ್ಟ್ರ-ಇದಕ್ಕೆ ಬ್ಯಾಂಕಿಂಗ್ ನಿಯಂತ್ರಣ ಕಾಯಿದೆ 1949(ಎ ಎ ಸಿ ಎಸ್) ರ ಪ್ರಕರಣ 35 A ರ ಅಡಿಯಲ್ಲಿ ನಿರ್ದೇಶನ

ಭಾರತೀಯ ರಿಜರ್ವ್ ಬ್ಯಾಂಕ್ ಬ್ಯಾಂಕಿಂಗ್ ನಿಯಂತ್ರಣ ಕಾಯಿದೆ 1949(ಎ ಎ ಸಿ ಎಸ್) ರ ಪ್ರಕರಣ 35 A ರ ಅಡಿಯಲ್ಲಿ **ಆರ್ ಎಸ್ ಕೋ ಆಪರೇಟಿವ್ ಬ್ಯಾಂಕ್ ಲಿಮಿಟೆಡ್, ನಾಶಿಕ್, ಮಹಾರಾಷ್ಟ್ರ** –ಇದನ್ನು 24 ಜೂನ್ 2015 ರಂದು ನೀಡಿದ್ದ ಆದೇಶದ ಪ್ರಕಾರ 26 ಜೂನ್ 2016 ರ ವ್ಯವಹಾರ ಸಮಯದ ನಂತರದಿಂದ ನಿರ್ದೇಶನಗಳಡಿ ಇರಿಸಲಾಗಿತ್ತು. ಹಾಗೂ ಈ ನಿರ್ದೇಶನಗಳ ಸಿಂಧುತ್ವವನ್ನು ಕಾಲಕಾಲಕ್ಕೆ ಸೂಕ್ತ ಮಾರ್ಪಾಡುಗಳೊಂದಿಗೆ ವಿಸ್ತರಿಸಲಾಗಿತ್ತು. ಹೀಗೆ ಕಡೆಯ ಬಾರಿ ನಿರ್ದೇಶನಗಳನ್ನು 20 ಮಾರ್ಚ್ 2017 ರಂದು ನೀಡಿದ ಆದೇಶದ ಮೂಲಕ 25 ಸೆಪ್ಟೆಂಬರ್ 2017 ರ ವರೆಗೆ ವಿಸ್ತರಿಸಲಾಗಿತ್ತು (ಪರಿಶೀಲನೆಗೆ ಒಳಪಡುತ್ತದೆ).

ಈ ಮೂಲಕ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ ಮೇಲೆ ತಿಳಿಸಿದ ನಿರ್ದೇಶನಗಳ ಸಿಂಧುತ್ವವನ್ನು ನಮ್ಮ 20 ಸೆಪ್ಟೆಂಬರ್ 2017 ರಂದು ನೀಡಿದ ಆದೇಶದ ಅನುಸಾರ ಮತ್ತೆ ನಾಲ್ಕು ತಿಂಗಳು ಅಂದರೆ 26 ಸೆಪ್ಟೆಂಬರ್ 2017 ರಿಂದ 25 ಜನವರಿ 2018 ರ ವರೆಗೆ ವಿಸ್ತರಿಸಲಾಗಿದೆ.

ನಿರ್ದೇಶನದ ಒಂದು ಪ್ರತಿಯನ್ನು ಬ್ಯಾಂಕ್ ಆವರಣದಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಪ್ರದರ್ಶಿಸಲಾಗಿದೆ.

ಭಾರತೀಯ ರಿಸರ್ವ್ ಬ್ಯಾಂಕಿನಿಂದ ನೀಡಲ್ಪಟ್ಟ ಈ ತಿದ್ದುಪಡಿ ನಿರ್ದೇಶನವು, ಈ ಬ್ಯಾಂಕಿನ ಹಣಕಾಸಿನ ಪರಿಸ್ಥಿತಿಯಲ್ಲಿ ಗಣನೀಯವಾಗಿ ಸುಧಾರಣೆಯಾಗಿ ಭಾರತೀಯ ರಿಸರ್ವ್ ಬ್ಯಾಂಕಿಗೆ ತೃಪ್ತಿದಾಯಕವಾಗಿ ತೋರಿದೆಯೆಂದು ಅರ್ಥೈಸಿಕೊಳ್ಳಬಾರದು.

**ಅಜಿತ್ ಪ್ರಸಾದ್**

ಸಹಾಯಕ ಸಲಹೆಗಾರರು

**ಪತ್ರಿಕಾ ಪ್ರಕಟಣೆ : 2017-2018/840**